**ನ್ಯಾಯಮೂರ್ತಿ ಡಾ. ಹೆಚ್.ಎನ್.ನಾಗಮೋಹನ್ ದಾಸ್,**
**ಏಕ ಸದಸ್ಯ ಆಯೋಗ,**
**ಯವನಿಕ ಕಟ್ಟಡ, ನೃಪತುಂಗ ರಸ್ತೆ, ಬೆಂಗಳೂರು-560001**
**Mobile No: 9480843012** **E-mail- justicengmdasinquirycommission@gmail.com**

ಸಂ: ನ್ಯಾಹೆಚ್ಎನ್ಏಸಆ/ಸಕಇ/2025 ದಿನಾಂಕ: 08-05-2025

ಇವರಿಗೆ,

1. ರಾಜ್ಯ ಮಟ್ಟದ ಸಮನ್ವಯ ಸಮಿತಿ,
2. ಬಿ.ಬಿ.ಎಂ.ಪಿ ಸಮನ್ವಯ ಸಮಿತಿ,
3. ಜಿಲ್ಲಾ ಮಟ್ಟದ ಸಮನ್ವಯ ಸಮಿತಿ,
4. ತಾಲ್ಲೂಕು ಮಟ್ಟದ ಸಮನ್ವಯ ಸಮಿತಿ.

ಮಾನ್ಯರೆ,

**ವಿಷಯ:** ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ: 2025 ಕುರಿತು ಸ್ಪಷ್ಟೀಕರಣ ನೀಡುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಆದೇಶ ಸಂ: SWD/8/SLP/2024(P-1), ಬೆಂಗಳೂರು, ದಿನಾಂಕ: 03-12-2024
2. ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ ರವರ ಪತ್ರ ಸಂಖ್ಯೆ: ಕಂ: ಸಕಇ:ಜಾತಿಸಮೀಕ್ಷೆ/ಸಿಆರ್1/25-26, ದಿನಾಂಕ: 07-05-2025
3. ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ ರವರ ಪತ್ರ ಸಂಖ್ಯೆ: ಕಂ: ಸಕಇ:ಎಚ್.ಎನ್.ನಾ:ಜಾತಿಸಮೀಕ್ಷೆ/ಸಿಆರ್/25-26, ದಿನಾಂಕ: 08-05-2025
4. ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ ರವರ ಪತ್ರ ಸಂಖ್ಯೆ: ಕಂ: ಸಕಇ/ಬ/ನ್ಯಾ/ಹೆಚ್.ಎನ್.ನಾ.ಮೋ.ದಾ.ಆ/ಜಾ.ಸ/2025-26, ದಿನಾಂಕ: 08-05-2025
5. ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ ರವರ ಪತ್ರ ಸಂಖ್ಯೆ: ಉನಿ: ಸಕಇರಾ/ನಾ.ಮೋ.ದಾ.ಆ/ಒ.ಮೀ.ಸ/ಸಿ.ಆರ್/2025-26, ದಿನಾಂಕ: 08-05-2025
6. ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ ರವರ ಪತ್ರ ಸಂಖ್ಯೆ: ಉನಿ: ಸಕಇಬೀ/ಮೀಸಲಾತಿ/ಒ.ಮೀ.ಸ/ಸಿ.ಆರ್-01/2025-26, ದಿನಾಂಕ: 08-05-2025

*****

ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಗಳ ವಿವಿಧ ಉಪ ಗುಂಪುಗಳಲ್ಲಿ ಪ್ರಾತಿನಿಧ್ಯತೆ ಕುರಿತು Emperical Data ಪಡೆದು ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ (ಉಪ ವರ್ಗೀಕರಣ) ಬಗ್ಗೆ ವರದಿ ಸಲ್ಲಿಸಲು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಡಾ. ಹೆಚ್. ಎನ್. ನಾಗಮೋಹನ್ ದಾಸ್ ಇವರ ಅಧ್ಯಕ್ಷತೆಯಲ್ಲಿ ಉಲ್ಲೇಖಿತ ಸರ್ಕಾರದ ಆದೇಶದಂತೆ ಏಕ ಸದಸ್ಯ ಆಯೋಗವನ್ನು ರಚಿಸಲಾಗಿರುತ್ತದೆ.

ಸದರಿ ಆಯೋಗ ಈಗಾಗಲೇ ನೀಡಿರುವ ಮಧ್ಯಂತರ ವರದಿಯಂತೆ ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ ನಡೆಸಲು ಕೈಗತ್ತಿಗೊಳ್ಳಲಾಗಿದೆ. ಸಮೀಕ್ಷೆಯನ್ನು ಮೂರು ಹಂತದಲ್ಲಿ ನಡೆಸಲು ಈಗಾಗಲೇ ಹಲವಾರು ಸೂಚನೆಗಳನ್ನು ಜಿಲ್ಲಾಧಿಕಾರಿಗಳಿಗೆ ಹಾಗೂ ಬಿ.ಬಿ.ಎಂ.ಪಿ ಮುಖ್ಯ ಆಯುಕ್ತರಿಗೆ ಕೈಪಿಡಿ ಮೂಲಕ ಸೂಚಿಸಲಾಗಿರುತ್ತದೆ. ಆದಾಗ್ಯೂ, ಹಲವಾರು ಜಿಲ್ಲಾಧಿಕಾರಿಗಳು ಈ ಸಮೀಕ್ಷೆಯಲ್ಲಿ ಪರಿಶಿಷ್ಟ ಜಾತಿ ಪ್ರಮಾಣ ಪತ್ರದ ಅಗತ್ಯದ ಬಗ್ಗೆ ಸ್ಪಷ್ಟೀಕರಣ ಕೋರಿರುತ್ತಾರೆ.

ಈ ಸಮೀಕ್ಷೆಯು ಸರ್ಕಾರದ ಆದೇಶದನ್ವಯ ಸದರಿ ಏಕ ಸದಸ್ಯ ಆಯೋಗಕ್ಕೆ ದಿನಾಂಕ:03-12-2024 ರಲ್ಲಿ Terms of references ಗಳನ್ನು ಈ ಕೆಳಕಂಡಂತೆ ನಿಗಧಿಪಡಿಸಿ ಆದೇಶಿಸಲಾಗಿರುತ್ತದೆ.

1. ಕರ್ನಾಟಕ ರಾಜ್ಯದಲ್ಲಿ ಲಭ್ಯವಿರುವ ದತ್ತಾಂಶ ಮತ್ತು 2011ರ ಜನಗಣತಿಯನ್ನು ಪರಿಗಣಿಸಿ, ವೈಜ್ಞಾನಿಕವಾಗಿ ತರ್ಕಬದ್ಧ ಒಳ ಮೀಸಲಾತಿ (ಉಪ-ವರ್ಗೀಕರಣ) ಮತ್ತು ಪರಿಶಿಷ್ಟ ಜಾತಿಗಳಲ್ಲಿ ಸಮಾನ ಜಾತೀಯ (Homogeneous) ಉಪ-ಜಾತಿಗಳ ಗುಂಪುಗಳನ್ನು ಒಟ್ಟುಗೂಡಿಸುವ ಬಗ್ಗೆ ಪರಿಶೀಲಿಸುವುದು.
2. ರಾಜ್ಯದ ಸಾರ್ವಜನಿಕ ಸೇವೆಗಳಲ್ಲಿ ಮತ್ತು ಶಿಕ್ಷಣ ಸಂಸ್ಥೆಗಳ ಪ್ರವೇಶಾತಿಗಳಲ್ಲಿ ಪ್ರಾತಿನಿಧ್ಯದ ಅಸಮರ್ಪಕತೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಕರ್ನಾಟಕ ರಾಜ್ಯದಲ್ಲಿನ ಪರಿಶಿಷ್ಟ ಜಾತಿಗಳ ವಿವಿಧ ಉಪ ಗುಂಪುಗಳಲ್ಲಿ ಅಂತರ್‌ಹಿಂದುಳಿದಿರುವಿಕೆಯನ್ನು (Inter-se backwardness) ಗುರುತಿಸಲು Empirical data ಸಂಗ್ರಹಿಸುವುದು.
3. ಕರ್ನಾಟಕ ರಾಜ್ಯದಲ್ಲಿನ ಪರಿಶಿಷ್ಟ ಜಾತಿಗಳ ವಿವಿಧ ಉಪ ಗುಂಪುಗಳಲ್ಲಿ ಅಂತರ್‌ಹಿಂದುಳಿದಿರುವಿಕೆ (Inter-se backwardness) ಹಾಗೂ ಪ್ರಾತಿನಿಧ್ಯತೆಯ ಆಧಾರದ ಮೇಲೆ ಸೂಕ್ತ ಒಳ ಮೀಸಲಾತಿ (ಉಪ-ವರ್ಗೀಕರಣ) ಮಾಡುವ ಬಗ್ಗೆ, ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಮೀಸಲಾತಿ ಪ್ರಮಾಣವನ್ನು ನಿಗಧಿಪಡಿಸುವ ಬಗ್ಗೆ ಪರಿಶೀಲಿಸುವುದು.
4. ಆಯೋಗವು ಅಗತ್ಯವಿದ್ದಲ್ಲಿ, ತನ್ನ ವಿವೇಚನೆಯಂತೆ ಮತ್ತು ಅಂತರ್‌ಹಿಂದುಳಿದಿರುವಿಕೆಯ ಬಗ್ಗೆ ಇನ್ನಿತರ ಸೂಕ್ತ ದತ್ತಾಂಶಗಳು (Empirical data) ಲಭ್ಯವಿದ್ದಲ್ಲಿ ಸಂಗ್ರಹಿಸಬಹುದು.
5. ಪರಿಶಿಷ್ಟ ಜಾತಿಯೊಳಗಿನ ವಿವಿಧ ಉಪ ಗುಂಪುಗಳ ಸಾಮಾಜಿಕ, ಆರ್ಥಿಕ, ರಾಜಕೀಯ ಮತ್ತು ಶೈಕ್ಷಣಿಕ ಹಿಂದುಳಿದಿರುವಿಕೆಯ ವಿವಿಧ ಸಮಸ್ಯೆಗಳನ್ನು ಪರಿಶೀಲಿಸುವ ಬಗ್ಗೆ ಮತ್ತು ಮಾನ್ಯ ಸರ್ವೋಚ್ಚ ನ್ಯಾಯಾಲಯವು (ಪಂಜಾಬ್ ರಾಜ್ಯ ಮತ್ತು ಇತರರ ವಿರುದ್ಧ ಶ್ರೀ ದೇವಿಂದರ್ ಸಿಂಗ್ ಮತ್ತು ಇತರರು ಸಿವಿಲ್ ಮೇಲ್ಮನವಿ ಸಂಖ್ಯೆ: 2317/2011ರ ದಿನಾಂಕ:01-08-2024ರ ಪ್ರಕರಣದಲ್ಲಿ) ನೀಡಿರುವ ತೀರ್ಪಿನ ಅನ್ವಯ ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿಯ (ಉಪ-ವರ್ಗೀಕರಣ) ಬಗ್ಗೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ವಿಧಾನ ಬಗ್ಗೆ ಪರಿಶೀಲಿಸುವುದು.
6. ಮೀಸಲಾತಿ ನೀತಿಗಳ ಪ್ರಯೋಜನವನ್ನು ಪರಿಶಿಷ್ಟ ಜಾತಿಗಳ ವಿವಿಧ ಉಪ ಗುಂಪುಗಳ ನಡುವೆ ಸಮಾನವಾಗಿ ಪಡೆಯಲಾಗುತ್ತಿದೆಯೇ ಎಂಬುದರ ಬಗ್ಗೆ ಪರಿಶೀಲಿಸುವುದು ಮತ್ತು ಮೇಲ್ಕಂಡ ಎಲ್ಲಾ ಅಂಶಗಳ ಬಗ್ಗೆ ಕೈಗೊಳ್ಳಬಹುದಾದ ಇತರ ಕ್ರಮಗಳ ಕುರಿತು ನಿರ್ದಿಷ್ಟ ಶಿಫಾರಸ್ಸುಗಳೊಂದಿಗೆ ವರದಿಯನ್ನು ಸಲ್ಲಿಸುವುದು.

ಮೇಲಿನಂತೆ ಆಯೋಗಕ್ಕೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ವಿತರಣೆ ಕುರಿತು ಅಥವಾ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ಪಡೆಯುವ ಬಗ್ಗೆ terms of reference ನಲ್ಲಿ ಸೇರಿರುವುದಿಲ್ಲ. ಸರ್ವೇ ಕಾರ್ಯಕ್ರಮದಲ್ಲಿ ಪರಿಶಿಷ್ಟ ಜಾತಿಯವರು ಕರ್ನಾಟಕ ರಾಜ್ಯದವರಾಗಿರುವ ಬಗ್ಗೆ

ಅಧಿಕೃತ ದಾಖಲೆಗಳನ್ನು ಹೊಂದಿದ್ದು, ಗಣತಿದಾರರಿಗೆ ತಮ್ಮ ಜಾತಿಯನ್ನು ಮತ್ತು ಇತರ ಮಾಹಿತಿಯನ್ನು ಗಣತಿದಾರರಿಗೆ ನಿಖರವಾಗಿ ನೀಡುವುದು. ಪರಿಶಿಷ್ಟ ಜಾತಿ ಪ್ರಮಾಣ ಪತ್ರವನ್ನು ಈ ಸಮೀಕ್ಷೆಯ ಆಧಾರದ ಮೇಲೆ ನೀಡಲು ಅವಕಾಶವಿರುವುದಿಲ್ಲ. ಅರ್ಜಿದಾರರು ಕರ್ನಾಟಕ ಅನುಸೂಚಿತ ಜಾತಿಗಳು ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮ, 1990 ಮತ್ತು ನಿಯಮಗಳು, 1992 ಗಳಂತೆ ನಿಗದಿತ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಿ ನಿಯಮಾನುಸಾರ ಜಾತಿ ಪ್ರಮಾಣ ಪತ್ರವನ್ನು ಪಡೆಯಬಹುದಾಗಿದೆ.

ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ– 2025 ಕ್ಕೂ ಜಾತಿ ಪ್ರಮಾಣ ಪತ್ರ ನೀಡುವುದಕ್ಕೂ ಯಾವುದೇ ಸಂಬಂಧವಿರುವುದಿಲ್ಲ. ಆದ್ದರಿಂದ, ಕರ್ನಾಟಕ ಪರಿಶಿಷ್ಟ ಜಾತಿ ಪಟ್ಟಿಗೆ 101 ಸಮುದಾಯಗಳು ಪರಿಶಿಷ್ಟ ಜಾತಿ ಪ್ರಮಾಣ ಪತ್ರ ಪಡೆಯದೇ ಇದ್ದಲ್ಲಿಯೂ ಸಹ ಸಮೀಕ್ಷೆಯಲ್ಲಿ ನಿಖರ ಮಾಹಿತಿಯನ್ನು ನೀಡಬಹುದು. (ಆದರೆ, ಪರಿಶಿಷ್ಟ ಪಂಗಡ ಅಥವಾ ಇತರೇ ಹಿಂದುಳಿದ ವರ್ಗಗಳ ಜಾತಿ ಪ್ರಮಾಣ ಪತ್ರವನ್ನು ಈಗಾಗಲೇ ಪಡೆದಿದ್ದಲ್ಲಿ, ಅಂತಹವರನ್ನು ಸಮೀಕ್ಷೆಯಲ್ಲಿ ಪರಿಶಿಷ್ಟ ಜಾತಿ ಎಂದು ಪರಿಗಣಿಸಲು ಅವಕಾಶವಿಲ್ಲ).

ಉಲ್ಲೇಖ (2) ರಿಂದ (6) ರಲ್ಲಿನ ಜಿಲ್ಲಾಧಿಕಾರಿಗಳ ಪತ್ರದಲ್ಲಿ ಗಣತಿದಾರರಿಗೆ ನೀಡಿರುವ ಕೈಪಿಡಿಯಲ್ಲಿನ FAQ 90 ರಲ್ಲಿ ಬೇಡ ಜಂಗಮ ಸಮುದಾಯದವರಿಗೆ ಜಾತಿ ಪ್ರಮಾಣ ಪತ್ರದ ಆಧಾರದ ಮೇಲೆ ಸಮೀಕ್ಷೆ ನಡೆಸುವುದು ಎಂದು ತಿಳಿಸಲಾಗಿರುತ್ತದೆ. ಮುಂದುವರೆದು FAQ 31 ರಲ್ಲಿ ಜಾತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಪಡೆಯುವ ಅಗತ್ಯವಿಲ್ಲವೆಂದು ತಿಳಿಸಲಾಗಿದ್ದು, ಸಮೀಕ್ಷೆಯಲ್ಲಿ FAQ-90 ರಂತೆ ಬೇಡ ಜಂಗಮ ಜಾತಿಯವರ ಜಾತಿ ಪ್ರಮಾಣ ಪತ್ರದ ಆಧಾರದ ಮೇಲೆ ಸಮೀಕ್ಷೆಯನ್ನು ಕೈಗೊಳ್ಳಬೇಕೆ? ಎಂಬುದರ ಬಗ್ಗೆ ಸ್ಪಷ್ಟೀಕರಣ ಕೋರಿರುತ್ತಾರೆ.

ಕೈಪಿಡಿಯಲ್ಲಿನ ಪುಟ ಸಂಖ್ಯೆ: 83 ರಲ್ಲಿ (ಅನುಬಂಧ-4) ಜಿಲ್ಲಾ ಮಟ್ಟದಲ್ಲಿ ನಡೆದ ತರಬೇತಿಗಳಲ್ಲಿ ಕೇಳಿದ ವಿವಿಧ ಪ್ರಶ್ನೆಗಳಿಗೆ ಸ್ಪಷ್ಟೀಕರಣದ ನೀಡುವ ಬಗ್ಗೆ ನಮೂದಿಸಲಾಗಿದೆ. **ಸದರಿ ಸ್ಪಷ್ಟೀಕರಣಗಳಲ್ಲಿ ಕ್ರ.ಸಂ.90 ರಲ್ಲಿ ನೀಡಿರುವ ಸ್ಪಷ್ಟೀಕರಣವನ್ನು ಕೈ ಬಿಡಲಾಗಿದೆ. ಮತ್ತು FAQ-90 ರಲ್ಲಿನ ಪ್ರಶ್ನೆಗೆ ಅನುಕ್ರಮ ಸಂಖ್ಯೆ-31 ಮತ್ತು ಅನುಕ್ರಮ ಸಂಖ್ಯೆ-11 ರಲ್ಲಿ ಸೂಚಿಸಿರುವಂತೆ ಕ್ರಮವಹಿಸಲು ತಿಳಿಸಿದೆ.**

ಮುಂದುವರೆದು, ಸ್ವಯಂ ಧೃಡೀಕರಣ ಪತ್ರದಲ್ಲಿ ಕುಟುಂಬದ ಮುಖ್ಯಸ್ಥರು/ಮಾಹಿತಿದಾರರು ಅವರೇ ಖುದ್ದಾಗಿ ಮಾಹಿತಿಯನ್ನು ದೃಢೀಕರಿಸಿರುವುದರಿಂದ, ತಮ್ಮ ಜಾತಿಯನ್ನು ಸರಿಯಾಗಿ ಘೋಷಿಸದೆ, ಮುಂದಿನ ದಿನಗಳಲ್ಲಿ ಸುಳ್ಳು ಘೋಷಣೆ ಸಲ್ಲಿಸಿರುವುದು ಕಂಡುಬಂದಲ್ಲಿ ಕಾನೂನು ರೀತಿಯ ಕ್ರಮ ಜರುಗಿಸಲಾಗುತ್ತದೆ.

ಈ ಮೇಲಿನ ಅಂಶಗಳನ್ನು ಎಲ್ಲಾ ಗಣತಿದಾರರಿಗೆ ಹಾಗೂ ಮೇಲ್ವಿಚಾರಕರ ಗಮನಕ್ಕೆ ತರಲು ಜಿಲ್ಲಾ ಮಟ್ಟದ/ಬಿ.ಬಿ.ಎಂ.ಪಿ/ತಾಲ್ಲೂಕು ಮಟ್ಟದ ಸಮಿತಿಗಳು ಸೂಕ್ತ ಕ್ರಮವಹಿಸುವಂತೆ ತಿಳಿಸಲು ಮಾನ್ಯ ಅಧ್ಯಕ್ಷರಿಂದ ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

8/5/2025

ಕಾರ್ಯದರ್ಶಿ,
ಏಕ ಸದಸ್ಯ ವಿಚಾರಣಾ ಆಯೋಗ,
ಬೆಂಗಳೂರು.

**ಪ್ರತಿಯನ್ನು:-**

1. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು
2. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು
4. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
5. ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ, ಬೆಂಗಳೂರು.
6. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
7. ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.

**ಪ್ರತಿಯನ್ನು ಮಾಹಿತಿಗಾಗಿ:-**

ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.